# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 591
2. ಮಾನ್ಯ ಸದಸ್ಯರ ಹೆಸರು : ಶ್ರೀ ಪ್ರಕಾಶ್ ಕೆ ರಾಥೋಡ್ (ನಾಮನಿರ್ದೇಶನ ಹೊಂದಿದವರು)
3. ಉತ್ತರಿಸಬೇಕಾದ ದಿನಾಂಕ : 20.02.2024
4. ಉತ್ತರಿಸುವ ಸಚಿವರು : ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರ ಹಾಗೂ ಕೃಷಿ ಮಾರುಕಟ್ಟೆ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯಾದ್ಯಂತ ಕಬ್ಬು ಬೆಳೆಗಾರರಿಗೆ ಸಕ್ಕರೆ ಕಾರ್ಖಾನೆಗಳಿಂದ ಬರಬೇಕಾಗಿರುವ ಬಾಕಿ ಹಣ ಎಷ್ಟು; (ವರ್ಷವಾರು ವಿವರ ನೀಡುವುದು) | ರಾಜ್ಯದ ಸಕ್ಕರೆ ಕಾರ್ಖಾನೆಗಳು ಕಳೆದ 5 ವರ್ಷಗಳಲ್ಲಿ ಕಬ್ಬು ಸರಬರಾಜು ಮಾಡಿದ ರೈತರಿಗೆ ಪಾವತಿಸಿರುವ ಕಬ್ಬು ಬಿಲ್ಲು ಪಾವತಿ ವಿವರಗಳು ಈ ಕೆಳಕಂಡಂತಿದೆ. |

(ರೂ. ಕೋಟಿಗಳಲ್ಲಿ)

| ವರ್ಷ | ಪಾವತಿಸ ಬೇಕಾದ ಮೊತ್ತ | ಪಾವತಿಸಿದ ಮೊತ್ತ | ಬಾಕಿ ಮೊತ್ತ |
|---|---|---|---|
| 2018-2019 | 11948.39 | 12088.80 | 3.94 |
| 2019-2020 | 10428.96 | 10677.74 | ಇಲ್ಲ |
| 2020-2021 | 13402.22 | 13533.08 | ಇಲ್ಲ |
| 2021-2022 | 19634.84 | 19922.39 | ಇಲ್ಲ |
| 2022-2023 | 19747.85 | 20138.93 | ಇಲ್ಲ |
| 2023-24 (ದಿ: 31.01.2024 ರಲ್ಲಿದ್ದಂತೆ) | 15764.03 | 12026.21 | 3668.35 |

ಕಳೆದ ಹಂಗಾಮುಗಳಲ್ಲಿ ಕೆಲವು ಸಕ್ಕರೆ ಕಾರ್ಖಾನೆಗಳು ಎಫ್.ಆರ್.ಪಿ. ದರಕ್ಕೂ ಮೇಲ್ಪಟ್ಟು ಕಬ್ಬಿನ ಬಿಲ್ಲನ್ನು ಪಾವತಿಸಿರುತ್ತವೆ.

2018-19 ರಲ್ಲಿ ಮಾತ್ರ ಕಾರ್ಖಾನೆಗಳು ಕಬ್ಬು ಬಿಲ್ಲು ಬಾಕಿಯನ್ನು ಉಳಿಸಿಕೊಂಡಿದ್ದು ವಿವರ ಕೆಳಗಿನಂತೆ ಇರುತ್ತದೆ.

(ರೂ.ಕೋಟಿಗಳಲ್ಲಿ)

| ವರ್ಷ | ಕಾರ್ಖಾನೆಯಹೆಸರು | ಬಾಕಿಯಿರುವ ಮೊತ್ತ |
|---|---|---|
| 2018-19 | 1. ಬೀದರ ಸಹಕಾರಿ ಸಕ್ಕರ ಕಾರ್ಖಾನೆ ನಿ., ಹಳ್ಳಿಖೇಡ್, ಹುಮನಾಬಾದ ತಾಲ್ಲೂಕು, ಬೀದರ್ ಜಿಲ್ಲೆ | 0.89 |
| | 2. ಭವಾನಿ ಶುಗರ್ಸ್ ಲಿ., ಬರೂರ, ಬೀದರ್ ಜಿಲ್ಲೆ | 1.80 |
| | 3.ಧ್ಯಾನಯೋಗಿ ಶ್ರೀಶಿವಕುಮಾರ ಸ್ವಾಮೀಜಿ ಶುಗರ್ಸ್ ಲಿ., ಇಂಡಿ, ವಿಜಯಪುರ ಜಿಲ್ಲೆ | 1.25 |
| | ಒಟ್ಟು | 3.94 |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಆ) | ಕಬ್ಬು ಬೆಳೆಗಾರರ ಬೇಡಿಕೆಯಿಂದ ಬೆಂಬಲ ಬೆಲೆಯನ್ನು ನಿಗದಿಪಡಿಸಲಾಗಿದೆಯೇ; ನಿಗದಿಪಡಿಸಿದ್ದಲ್ಲಿ, ಗರಿಷ್ಠ ಎಷ್ಟು ಮೊತ್ತ ನಿಗದಿಪಡಿಸಲಾಗಿದೆ; | ಕೇಂದ್ರ ಸರ್ಕಾರದ ಗ್ರಾಹಕರ ವ್ಯವಹಾರಗಳು, ಆಹಾರ ಮತ್ತು ಸಾರ್ವಜನಿಕ ವಿತರಣಾ ಮಂತ್ರಾಲಯದ ಅಧೀನದ ಆಹಾರ ಮತ್ತು ಸಾರ್ವಜನಿಕ ವಿತರಣಾ ಇಲಾಖೆಯ ಪತ್ರ ಸಂಖ್ಯೆ:3(1)/2022-SP-I, ದಿನಾಂಕ: 06.07.2023ರಲ್ಲಿ, 2023-24ನೇ ಸಾಲಿನ ಸಕ್ಕರೆ ಹಂಗಾಮಿಗೆ ನ್ಯಾಯ ಮತ್ತು ಲಾಭದಾಯಕ ಬೆಲೆಯನ್ನು (Fair and Remunerative Price) ನಿಗದಿಗೊಳಿಸಲಾಗಿದ್ದು ವಿವರಗಳು ಈ ಕೆಳಕಂಡಂತೆ ಇರುತ್ತವೆ.<br>1. ಶೇಕಡ 10.25 ರಷ್ಟು ಸಕ್ಕರೆ ಇಳುವರಿಗೆ ಪ್ರತಿ ಕ್ವಿಂಟಾಲ್ ಕಬ್ಬಿಗೆ ರೂ.315.00<br>2. ಶೇಕಡ 10.25ಕ್ಕೆ ಮೇಲ್ಪಟ್ಟ ಇಳುವರಿಗೆ ತದನಂತರದ ಶೇಕಡ 0.1 ರಷ್ಟು ಇಳುವರಿಗೆ ಪ್ರತಿ ಕ್ವಿಂಟಾಲ್ ಕಬ್ಬಿಗೆ ರೂ.3.07 ರಂತೆ ಹೆಚ್ಚುವರಿ ಬೆಲೆ. |



e No. C I/49/COF/2024-SUGAR2-C&I SEC (Computer No. 1322261)
enerated from eOffice by SHOBHARANI H G, C&I-Asst(SHO), ASSISTANT, COMMERCE AND INDUSTRIES SECRETARIAT

| | | |
|---|---|---|
| | | 3. ಶೇಕಡ 10.25ಕ್ಕಿಂತ ಕಡಿಮೆ ಹಾಗೂ ಶೇಕಡ 9.5ಕ್ಕಿಂತ ಮೇಲ್ಪಟ್ಟ ಇಳುವರಿಯನ್ನು ಹೊಂದಿರುವ ಸಕ್ಕರೆ ಕಾರ್ಖಾನೆಗಳಿಗೆ ಸಂಬಂಧಿಸಿದಂತೆ ಶೇಕಡ 0.1 ರಷ್ಟು ಇಳುವರಿಗೆ ಪ್ರತಿ ಕ್ವಿಂಟಾಲ್‌ಗೆ ರೂ.3.07ರಷ್ಟು ಪ್ರಮಾಣದಲ್ಲಿ ನ್ಯಾಯ ಮತ್ತು ಲಾಭದಾಯಕ ಬೆಲೆಯನ್ನು ಕಡಿಮೆ ಮಾಡುವುದು.<br>4. ಶೇಕಡ 9.5 ರಷ್ಟು ಅಥವಾ 9.50 ಕ್ಕಿಂತ ಕಡಿಮೆ ಇಳುವರಿ ಹೊಂದಿರುವ ಕಾರ್ಖಾನೆಗಳಿಗೆ ಪ್ರತಿ ಮೆ.ಟನ್‌ಗೆ ರೂ.291.975 ಗಳ ನ್ಯಾಯ ಮತ್ತು ಲಾಭದಾಯಕ ಬೆಲೆ ನಿಗದಿಪಡಿಸುವುದು.<br><br>2022-23ನೇ ಸಾಲಿನಲ್ಲಿ ರಾಜ್ಯದ ಸಕ್ಕರೆ ಕಾರ್ಖಾನೆಗಳು ಪಡೆದ ಸಕ್ಕರೆ ಇಳುವರಿಯನ್ನು ಆಧರಿಸಿ, ಮೇಲ್ಕಂಡ ಮಾರ್ಗಸೂಚಿಗಳನ್ವಯ ರಾಜ್ಯದ ಸಕ್ಕರೆ ಕಾರ್ಖಾನೆಗಳು 2023-24ನೇ ಹಂಗಾಮಿನಲ್ಲಿ ಮೊದಲ ಕಂತಿನ ರೂಪದಲ್ಲಿ ಪಾವತಿಸಬೇಕಾದ ನ್ಯಾಯ ಮತ್ತು ಲಾಭದಾಯಕ ಬೆಲೆಯನ್ನು ನಿಗದಿಪಡಿಸಿ, ದಿನಾಂಕ:07.11.2023ರಂದು ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯದಿಂದ ಆದೇಶವನ್ನು ಹೊರಡಿಸಲಾಗಿದೆ. ಸದರಿ ಆದೇಶದಲ್ಲಿ ನಿಗದಿಪಡಿಸಿರುವಂತೆ ಸಂಬಂಧಿಸಿದ ರಾಜ್ಯದ ಸಕ್ಕರೆ ಕಾರ್ಖಾನೆಗಳು ಪ್ರತಿ ಮೆ.ಟನ್ ಒಂದಕ್ಕೆ ಕನಿಷ್ಠ ರೂ.2920/- ಮತ್ತು ಗರಿಷ್ಠ ರೂ.3773/-ಗಳ ನ್ಯಾಯ ಮತ್ತು ಲಾಭದಾಯಕ ಬೆಲೆಯನ್ನು ಪಾವತಿ ಮಾಡುತ್ತಿವೆ.<br><br>ಎಥನಾಲ್ ಉತ್ಪಾದಿಸುವ ರಾಜ್ಯದ ಸಕ್ಕರೆ ಕಾರ್ಖಾನೆಗಳು ಕಬ್ಬು ಸರಬರಾಜು ಮಾಡಿದ ರೈತರಿಗೆ ಮೊದಲ ಕಂತಿನಲ್ಲಿ ಕೇಂದ್ರ ಸರ್ಕಾರವು 2022-23ನೇ ಸಾಲಿಗೆ ನಿಗದಿಪಡಿಸಿರುವ ನ್ಯಾಯಯುತ ಮತ್ತು ಲಾಭದಾಯಕ ಬೆಲೆಯ ಜೊತೆಗೆ ಪ್ರತಿ ಮೆ. ಟನ್ ಒಂದಕ್ಕೆ ರೂ.50/- ಗಳನ್ನು ಹೆಚ್ಚುವರಿಯಾಗಿ ಪಾವತಿಸಲು ದಿನಾಂಕ:05.12.2022 ರಂದು ಆದೇಶಿಸಲಾಗಿತ್ತು. ರಾಜ್ಯದ ಎಲ್ಲಾ ಕಾರ್ಖಾನೆಗಳು ಕೇಂದ್ರ ಸರ್ಕಾರವು ಘೋಷಿಸಿದ ನ್ಯಾಯಯುತ ಮತ್ತು ಲಾಭದಾಯಕ ದರದ ಮೇಲೆ ಪ್ರತಿ ಮೆ. ಟನ್ನಿಗೆ ರೂ.100/- ಅನ್ನು ಹೆಚ್ಚುವರಿಯಾಗಿ ನೀಡಲು ದಿನಾಂಕ: 29.12.2022 ರಂದು ಆದೇಶಿಸಲಾಗಿತ್ತು.<br><br>ಸದರಿ ಆದೇಶಗಳನ್ನು ಪ್ರಶ್ನಿಸಿ ದಕ್ಷಿಣ ಭಾರತ ಸಕ್ಕರೆ ಕಾರ್ಖಾನೆಗಳ ಒಕ್ಕೂಟ (ಸಿಸ್ಮಾ) ಮತ್ತು ಇತರರು ಮಾನ್ಯ ಉಚ್ಛ ನ್ಯಾಯಾಲಯ, ಬೆಂಗಳೂರು ಇಲ್ಲಿ ರಿಟ್ ಅರ್ಜಿಯನ್ನು ಸಲ್ಲಿಸಿ, ಈ ಎರಡೂ ಆದೇಶ/ ಪತ್ರಗಳನ್ನು ವಜಾ ಮಾಡುವಂತೆ ಕೋರಿದ್ದರು. ಮಾನ್ಯ ನ್ಯಾಯಾಲಯವು ದಿನಾಂಕ:06.10.2023 ರಂದು ಆದೇಶ ನೀಡಿ, ರಾಜ್ಯ ಸರ್ಕಾರದ ವತಿಯಿಂದ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ನಿರ್ದೇಶನವನ್ನು ನೀಡಿರುತ್ತದೆ. ಅದರಂತೆ ಕ್ರಮ ವಹಿಸಲಾಗುತ್ತಿದೆ. |
| (ಇ) | ಬಾಕಿ ಹಣವನ್ನು ಯಾವ ಕಾಲಮಿತಿಯೊಳಗೆ ರೈತರಿಗೆ ತಲುಪಲು ಕ್ರಮ ತೆಗೆದುಕೊಳ್ಳಲಾಗುವುದು? | ಕಬ್ಬು (ನಿಯಂತ್ರಣ) ಆದೇಶ 1966ರ ಕಲಂ 3(3ಎ)ರ ಹಾಗೂ ಕರ್ನಾಟಕ ರಾಜ್ಯ ಕಬ್ಬು (ಖರೀದಿ ಮತ್ತು ಸರಬರಾಜು ನಿಯಂತ್ರಣ) ಅಧಿನಿಯಮ 2013 ಮತ್ತು ತಿದ್ದುಪಡಿ ಅಧಿನಿಯಮ 2014 ರನ್ವಯ ಕಾರ್ಖಾನೆಗಳು ಕಬ್ಬು ಸರಬರಾಜು ಮಾಡಿದ 14 ದಿವಸಗಳೊಳಗಾಗಿ ಕಬ್ಬು ಬಿಲ್ಲು ಪಾವತಿಸದಿದ್ದಲ್ಲಿ ನಂತರದ ಅವಧಿಗೆ ವಾರ್ಷಿಕ ಶೇಕಡ 15ರ ಬಡ್ಡಿಯೊಂದಿಗೆ ಪಾವತಿಸಬೇಕಿರುತ್ತದೆ.<br>ಕಬ್ಬು (ನಿಯಂತ್ರಣ) ಆದೇಶ-1966 ಕಲಂ-3(8) ರನ್ವಯ ಸಕ್ಕರೆ ಕಾರ್ಖಾನೆಗಳು ಕಬ್ಬು ಸರಬರಾಜು ಮಾಡಿದ ರೈತರಿಗೆ ನಿಗದಿತ ಅವಧಿಯಲ್ಲಿ ಕಬ್ಬು ಬಿಲ್ಲು ಪಾವತಿಸದೆ ಇದ್ದಲ್ಲಿ, ಕರ್ನಾಟಕ ಭೂಕಂದಾಯ ಕಾಯ್ದೆ 1964ರ ಅವಕಾಶಗಳ ರೀತ್ಯಾ ಬಾಕಿ ಉಳಿಸಿಕೊಂಡಿರುವ ಮೊತ್ತವನ್ನು ಭೂಕಂದಾಯ ಬಾಕಿ ಎಂದು ಪರಿಗಣಿಸಿ, ಶೇ.15ರ ಬಡ್ಡಿಯೊಂದಿಗೆ ವಸೂಲಿ ಮಾಡಲು ವಸೂಲಾತಿ ಪ್ರಮಾಣಪತ್ರವನ್ನು ಸಂಬಂಧಪಟ್ಟ ಜಿಲ್ಲಾಧಿಕಾರಿಗಳ ಮೂಲಕ ಜಾರಿಗೊಳಿಸಿ ಬಾಕಿ ವಸೂಲಾತಿಗೆ ಕ್ರಮ ಕೈಗೊಳ್ಳಲಾಗುವುದು. |



File No. C I/49/COF/2024-SUGAR2-C&I SEC (Computer No. 1322261)
Generated from eOffice by SHOBHARANI H.O., C&I-Asst(SHO), ASSISTANT, COMMERCE AND INDUSTRIES SECRETARIAT on 19/05/2026 01:06 PM

| | | |
|---|---|---|
| | | 2018-19ನೇ ಸಾಲಿನಲ್ಲಿ ಬಾಕಿ ಉಳಿಸಿಕೊಂಡಿರುವ ಮೂರು ಕಾರ್ಖಾನೆಗಳು ಕಳೆದ ನಾಲ್ಕು ಹಂಗಾಮುಗಳಿಂದ ಕಬ್ಬು ಅರೆಯುವ ಕಾರ್ಯವನ್ನು ಸ್ಥಗಿತಗೊಳಿಸಿರುವುದರಿಂದ ಕಾರ್ಖಾನೆಗಳಿಗೆ ಯಾವುದೇ ಆದಾಯದ ಮೂಲಗಳು ಇರುವುದಿಲ್ಲ. ಆದ್ದರಿಂದ ಕಬ್ಬು ಬಿಲ್ಲು ವಸೂಲು ಮಾಡುವಲ್ಲಿ ವಿಳಂಬವಾಗಿರುತ್ತದೆ. ಈ ಮೂರು ಕಾರ್ಖಾನೆಗಳ ವಿರುದ್ಧ ವಸೂಲಾತಿ ಪ್ರಮಾಣಪತ್ರವನ್ನು ಹೊರಡಿಸಿ ಕ್ರಮಕೈಗೊಳ್ಳಲು ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ. ಆದಾಗ್ಯೂ, ಕಬ್ಬು ಬಿಲ್ಲು ಪಾವತಿಸದೆ ಇರುವುದರಿಂದ ಈ ಮೂರು ಕಾರ್ಖಾನೆಗಳಿಗೆ ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಪತ್ರ ಬರೆದು ಚರ ಮತ್ತು ಸ್ಥಿರಾಸ್ತಿಗಳನ್ನು ಹರಾಜು ಪ್ರಕ್ರಿಯೆಗೆ ಒಳಪಡಿಸಿ ಕಬ್ಬು ಬಿಲ್ಲು ವಸೂಲಾತಿಗೆ ಸೂಕ್ತಕ್ರಮಕೈಗೊಳ್ಳುವಂತೆ ಸೂಚಿಸಲಾಗಿದ್ದು, ವಸೂಲಾತಿ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.<br><br>2023-24ನೇ ಸಾಲಿನಲ್ಲಿ 76 ಸಕ್ಕರೆ ಕಾರ್ಖಾನೆಗಳು ಕಬ್ಬು ಅರೆಯುವ ಕಾರ್ಯ ನಿರ್ವಹಿಸುತ್ತಿದ್ದು, ಕಬ್ಬು ಸರಬರಾಜು ಮಾಡಿದ ರೈತರಿಗೆ ದಿನಾಂಕ:31.01.2024ರ ಅಂತ್ಯಕ್ಕೆ ರೂ.15764.03ಕೋಟಿಗಳನ್ನು ಪಾವತಿಸಬೇಕಾಗಿದ್ದು, ಇದರಲ್ಲಿ ರೂ12026.21 ಕೋಟಿಗಳನ್ನು ಪಾವತಿಸಲಾಗಿದ್ದು, ರೂ.3668.35 ಕೋಟಿಗಳನ್ನು ಪಾವತಿಸುವುದು ಬಾಕಿ ಇರುತ್ತದೆ. ಬಾಕಿ ಪಾವತಿಸುವಂತೆ ಸೂಚಿಸಿ ಸಕ್ಕರೆ ನಿರ್ದೇಶನಾಲಯದಿಂದ ದಿನಾಂಕ:17.01.2024 ರಂದು ಶಾಸನಬದ್ಧ ನೋಟಿಸ್ ನೀಡಲಾಗಿರುತ್ತದೆ. ಪ್ರಸ್ತುತ ಹಂಗಾಮು ಚಾಲ್ತಿಯಲ್ಲಿರುವುದರಿಂದ ಬಾಕಿ ಕಬ್ಬು ಬಿಲ್ಲು ಪಾವತಿಗೆ ಕಾಲಾವಕಾಶವಿರುತ್ತದೆ. |

ಸಂಖ್ಯೆ: ಸಿಐ 49 ಸಿಓಎಫ್ 2024

(ಶಿವಾನಂದ ಎಸ್. ಪಾಟೀಲ್)
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ
ಹಾಗೂ ಕೃಷಿ ಮಾರುಕಟ್ಟೆ ಸಚಿವರು



e No. C I/49/COF/2024-SUGAR2-C&I SEC (Computer No. 1322261)
enerated from eOffice by SHOBHARANI H O, C&I-Asst(SHO), ASSISTANT, COMMERCE AND INDUSTRIES SECRETARIAT